ಶುಕ್ರವಾರ,1 ಜೂನ್ 2018 | ಪುಟಗಳು: 14+4+6 | ಬೆಲೆ: ₹ 5.00

www.vijaykarnataka.com

ಸಂಪುಟ: 17 | ಸಂಚಿಕೆ: 306

VK ವಿಜಯ ಕರ್ನಾಟಕ

ಮಂಗಳೂರು | ಬೆಂಗಳೂರು | ಮೈಸೂರು | ಶಿವಮೊಗ್ಗ | ಹುಬ್ಬಳ್ಳಿ | ಬಾಗಲಕೋಟ | ಕಲಬುರಗಿ |

PRIDE



ರಾಹುಲ್ ನನ್ನ ಫ್ರೆಂಡಷ್ಟೇ: ವೈರಲ್ ಆದ ಚಿತ್ರದ ಬಗ್ಗೆ ನಟಿ ನಿಧಿ ಅಗರ್ವಾಲ್ ಸ್ಪಷ್ಟೀಕರಣ



ಉಕ್ರೇನ್‌ನಿಂದ ವಾಯುಪಡೆ ವಿಮಾನ ಬಿಡಿಭಾಗಗಳ ಖರೀದಿ ಒಪ್ಪಂದದಲ್ಲಿ ಲಂಚಾವತಾರ: ತನಿಖೆಗೆ ರಾಹುಲ್ ಆಗ್ರಹ

ಕೇಂದ್ರ ಸಚಿವ ಮನ್‌ಸುಖ್ ಮಾಂಡವೀಯ ಗುಜರಾತ್ ಸಿಎಂ ಹುದ್ದೆ: ವದಂತಿ ನಿರಾಕರಣೆ


# ದಾಖಲೆ ತಡೆಹಿಡಿಯುವ ತಾಂತ್ರಿಕ ಕಾಲೇಜುಗಳು!

## ಸರಕಾರಿ ಆದೇಶ ಉಲ್ಲಂಘನೆ | ವಿದ್ಯಾರ್ಥಿಗಳಿಂದ ನ್ಯಾಯಕ್ಕಾಗಿ ಮೊರೆ

■ **ಮುಹಮ್ಮದ್ ಆರಿಫ್** ಮಂಗಳೂರು

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧೀನದಲ್ಲಿರುವ ಕೆಲವು ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ದಾಖಲೆಗೊಂಡಿರುವ ವಿದ್ಯಾರ್ಥಿಗಳು ಬೇರೆ ಕಾಲೇಜುಗಳ ಸೇರ್ಪಡೆ ಮತ್ತಿತರ ಕಾರಣಕ್ಕೆ ದಾಖಲೆ ಪತ್ರ ಕೇಳಿದರೆ ಅದನ್ನು ಮರಳಿಸದೆ ಸತಾಯಿಸಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳು ಆತಂತ್ರಗೊಂಡು ಹೋರಾಟದ ಹಾದಿ ಹಿಡಿಯುವಂತಾಗಿದೆ.

ಶೈಕ್ಷಣಿಕ ಸಾಲ ಮತ್ತು ವೈಯಕ್ತಿಕ ಕಾರಣಗಳಿಂದ ಕೆಲವು ವಿದ್ಯಾರ್ಥಿಗಳು ಕೋರ್ಸ್ ಮೊಟಕುಗೊಳಿಸಿ ಮುಂದಿನ ವಿದ್ಯಾಭ್ಯಾಸಕ್ಕಾಗಿ ಇತರ ಶಿಕ್ಷಣ ಸಂಸ್ಥೆಗೆ ಸೇರಲು ತೀರ್ಮಾನಿಸಿದ್ದಾರೆ. ಸೇರಲುದ್ದೇಶಿಸಿರುವ ಶಿಕ್ಷಣ ಸಂಸ್ಥೆಗಳು ಸಹಜವಾಗಿ ವಿದ್ಯಾರ್ಥಿಗಳ ದಾಖಲೆ ಪತ್ರ ಕೇಳುತ್ತಿವೆ.. ಕೆಲವು ಖಾಸಗಿ ಎಂಜಿನಿಯರಿಂಗ್ ಕಾಲೇಜಿನ ಆಡಳಿತ ಮಂಡಳಿಗಳು ದಾಖಲೆ ಪತ್ರ ನೀಡಲು ನಿರಾಕರಿಸುತ್ತಿವೆ ಎಂಬುದು ವಿದ್ಯಾರ್ಥಿಗಳ ದೂರು.



ವಿದ್ಯಾರ್ಥಿಗಳ ಮೂಲ ಪ್ರಮಾಣ ಪತ್ರ ಮರಳಿಸಲು ಸರಕಾರಿ ಆದೇಶ.

**ಆದೇಶ ಉಲ್ಲಂಘನೆ:** ಈಗಾಗಲೇ ಸರಕಾರ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆದೇಶದಂತೆ ವಿಶ್ವವಿದ್ಯಾಲಯದಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ಶಿಕ್ಷಣವನ್ನು ಅನಾರೋಗ್ಯ ಹಾಗೂ ಬೇರೆ ಶಿಕ್ಷಣ ಸಂಸ್ಥೆಗಳಿಗೆ ಸೇರಬಯಸುವ ಮತ್ತು ಇನ್ನೂ ಹಲವು ಕಾರಣಾಂತರಗಳಿಂದ ಮೊಟಕುಗೊಳಿಸಿದರೆ, ಅವರ ಮೂಲ ದಾಖಲೆ ಪತ್ರವನ್ನು ತಡೆಹಿಡಿಯುವಂತಿಲ್ಲ ಎಂಬುದು ಸರಕಾರಿ ಆದೇಶ.

ಒಂದು ವೇಳೆ ಇಂತಹ ಬೆಳವಣಿಗೆಗಳು ಕಂಡುಬಂದಲ್ಲಿ ಅಂತಹ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ವಿವಿ ಅಧೀನದಲ್ಲಿರುವ ರಾಜ್ಯದ ಎಲ್ಲ ಖಾಸಗಿ ಕಾಲೇಜುಗಳಿಗೆ ಸುತ್ತೋಲೆಗಳ ಮೂಲಕ ಆದೇಶಿಸಲಾಗಿತ್ತು.

ವಿದ್ಯಾಸಂಸ್ಥೆಗಳು ಇಲಾಖೆ ಆದೇಶ ಉಲ್ಲಂಘಿಸಿ ದಾಖಲೆ ಪತ್ರ ಕೇಳಲು ಹೋದ ವಿದ್ಯಾರ್ಥಿಗಳಿಗೆ ಸಂಪೂರ್ಣ ನಾಲ್ಕು ವರ್ಷದ ಶುಲ್ಕ ಪಾವತಿಸಲು ಸೂಚಿಸುತ್ತಿದ್ದಾರೆ. ಇಲ್ಲದಿದ್ದರೆ ತಮ್ಮ ಮೂಲ ಪ್ರಮಾಣಪತ್ರ ನೀಡಲು ಅಸಾಧ್ಯ ಎಂದು ವಿದ್ಯಾಸಂಸ್ಥೆಗಳ ಸಿಬ್ಬಂದಿ ಸಿದ್ಧ ಉತ್ತರ ನೀಡುತ್ತಿದ್ದಾರೆ.

ಸಂಸ್ಥೆಗಳ ಈ ನಿರ್ಧಾರದಿಂದ ವಿದ್ಯಾರ್ಥಿಗಳು ತಮ್ಮ ಭವಿಷ್ಯದಲ್ಲಿ ಮುಂದಿನ ಶಿಕ್ಷಣ ಮತ್ತು ಉದ್ಯೋಗಕ್ಕೆ ಹೋಗಲು ಅಸಾಧ್ಯವಾಗಿ ಆತಂತ್ರರಾಗಿದ್ದಾರೆ. ಈ ಬಗ್ಗೆ ಹಲವಾರು ದೂರುಗಳನ್ನು ಜಿಲ್ಲಾಧಿಕಾರಿ ಮೂಲಕ ಸಂಬಂಧಪಟ್ಟವರಿಗೆ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ, ಆದುದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಇಂತಹ ವಿದ್ಯಾಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಿಕೊಡಬೇಕು ಎಂಬುದು ಪೋಷಕರ ಆಗ್ರಹ.

ರಾಜ್ಯದ ತಾಂತ್ರಿಕ ವಿವಿಯ ಅಧೀನದಲ್ಲಿರುವ ಖಾಸಗಿ ವಿದ್ಯಾಸಂಸ್ಥೆಗಳು ದಾಖಲೆ ಪತ್ರಗಳನ್ನು ತಡೆಹಿಡಿಯುವ ಮೂಲಕ ವಿದ್ಯಾರ್ಥಿಗಳ ಭವಿಷ್ಯವನ್ನು ಆತಂತ್ರಕ್ಕೆ ತಳ್ಳುತ್ತಿದ್ದಾರೆ ಎನ್ನುತ್ತಾರೆ ಕ್ಯಾಂಪಸ್ ಫ್ರಂಟ್ ರಾಜ್ಯ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಶಾಕಿರ್.

ಸಂತ್ರಸ್ತ ವಿದ್ಯಾರ್ಥಿಗಳು ತಮ್ಮ ಸಂಪರ್ಕದಲ್ಲಿದ್ದು, ಸಚಿವ ಸಂಪುಟ ರಚನೆಯಾದ ನಂತರ ರಾಜ್ಯದ ಉನ್ನತ ಶಿಕ್ಷಣ ಸಚಿವರ ಗಮನಕ್ಕೆ ತರಲಿದ್ದೇವೆ. ಶೀಘ್ರ ನ್ಯಾಯ ದೊರಕದೆ ಇದ್ದಲ್ಲಿ ವಿದ್ಯಾರ್ಥಿಗಳನ್ನು ಸಂಘಟಿಸಿ ರಾಜ್ಯಮಟ್ಟದಲ್ಲಿ ಹೋರಾಟ ಸಂಘಟಿಸಲಿದ್ದೇವೆ ಎನ್ನುತ್ತಾರೆ ಅವರು.

ಶುಕ್ರವಾರ, ಜೂನ್ 1, 2018 | ₹ 5.00
www.prajavani.net
/prajavani.net

# ಪ್ರಜಾವಾಣಿ

ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

**ತಂಬಾಕು ರಹಿತ ದಿನ**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೆಂಗಳೂರಿನಲ್ಲಿ ಆಯೋಜಿಸಿದ್ದ ವಾಕಥಾನ್‌ನಲ್ಲಿ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿ ಪೋಸ್ಟರ್ ಹಿಡಿದು ಗಮನ ಸೆಳೆದರು

## ವಿದ್ಯಾರ್ಥಿಗಳಿಂದ ನ್ಯಾಯಕ್ಕಾಗಿ ಮೊರೆ: ತೀವ್ರ ಹೋರಾಟದ ಎಚ್ಚರಿಕೆ

# ದಾಖಲೆ ಪತ್ರ ತಡೆಹಿಡಿಯುವ ಕಾಲೇಜುಗಳು

ಪ್ರಜಾವಾಣಿ ವಾರ್ತೆ

ಮಂಗಳೂರು: ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಹಲವಾರು ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಶಿಕ್ಷಣ ಸಾಲ ಮತ್ತು ವೈಯಕ್ತಿಕ ಕಾರಣಗಳಿಂದ ಕೋರ್ಸುಗಳನ್ನು ಮೊಟಕುಗೊಳಿಸಿ ಬೇರೆ ಕಾಲೇಜುಗಳಿಗೆ ಸೇರುವ ಪ್ರಮೇಯ ಇದೆ. ಆದರೆ ಮೂಲ ದಾಖಲೆಗಳನ್ನು ನೀಡುವಲ್ಲಿ ಕಾಲೇಜುಗಳು ಸತಾಯಿಸು-ತ್ತಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ.

ಕ್ಯಾಂಪಸ್ ಫ್ರಂಟ್ ಆಫ್ ಇಂಡಿಯಾ (ಸಿಎಫ್ಐ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ವಿಷಯದಲ್ಲಿ ತೀವ್ರ ಹೋರಾಟ ನಡೆಸಲು ಮುಂದಾಗಿದ್ದು, ಸರ್ಕಾರ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆದೇಶವನ್ನು ಎಲ್ಲ ಎಂಜಿನಿಯರಿಂಗ್ ಕಾಲೇಜುಗಳು ಪಾಲಿಸಬೇಕು ಎಂದು ಆಗ್ರಹಿಸಿದೆ.

ಹಲವು ಕಾರಣಗಳಿಗಾಗಿ ವಿದ್ಯಾರ್ಥಿಗಳು ತಾವು ಸೇರಿದ್ದ ಕಾಲೇಜು ಬಿಟ್ಟು ಬೇರೆ ಕಾಲೇಜು ಸೇರುವ ಪ್ರಮೇಯ ಬರುತ್ತದೆ. ಆಗ ಹೊಸ ಕಾಲೇಜಿನಲ್ಲಿ ಮೂಲ ದಾಖಲೆಗಳನ್ನು ಕೇಳುತ್ತಾರೆ. ಆದರೆ ಈ ಹಿಂದೆ ದಾಖಲಾಗಿದ್ದ ಕಾಲೇಜುಗಳ ಆಡಳಿತ ಮಂಡಳಿಯು ದಾಖಲೆ ಪತ್ರವನ್ನು ನೀಡಲು ನಿರಾಕರಿಸುತ್ತಿವೆ. ಕಾಲೇಜಿನ ಈ ನಿಯಮದಿಂದ ವಿದ್ಯಾರ್ಥಿಗಳು ಅತಂತ್ರಗೊಂಡು ಹೋರಾಟದ ಹಾದಿ ತುಳಿಯುವುದು ಅನಿವಾರ್ಯವಾಗಿದೆ ಎಂದು ಸಿಎಫ್ಐ ರಾಜ್ಯ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಶಾಕಿರ್ ತಿಳಿಸಿದ್ದಾರೆ.

**ಮುಖ್ಯಾಂಶಗಳು**

- ಪೂರ್ತಿ ಶುಲ್ಕ ತುಂಬಲು ಕಾಲೇಜುಗಳಿಂದ ಒತ್ತಾಯ
- ಶುಲ್ಕ ಭರಿಸಲು ಸಾಧ್ಯ ಆಗದೆ ವಿದ್ಯಾರ್ಥಿಗಳ ಸಂಕಷ್ಟ
- ದಾಖಲೆಪತ್ರ ದೊರೆಯುವುದು ವಿಳಂಬವಾದರೂ ತೊಂದರೆ

**ಶೀಘ್ರ ನ್ಯಾಯ ದೊರಕದೆ ಇದ್ದಲ್ಲಿ ವಿದ್ಯಾರ್ಥಿಗಳನ್ನು ಸಂಘಟಿಸಿ ರಾಜ್ಯಮಟ್ಟದಲ್ಲಿ ಹೋರಾಟ ಸಂಘಟಿಸಲಿದ್ದೇವೆ**

**ಮಹಮ್ಮದ್ ಶಾಕಿರ್**
ಸಿಎಫ್ಐ ರಾಜ್ಯ ಪ್ರಧಾನ ಕಾರ್ಯದರ್ಶಿ

**ಆದೇಶದಲ್ಲಿ ಏನಿದೆ?:** ಸರ್ಕಾರ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆದೇಶದಂತೆ ವಿದ್ಯಾರ್ಥಿಗಳು ಶಿಕ್ಷಣವನ್ನು ಅನಾರೋಗ್ಯ ಹಾಗೂ ಬೇರೆ ಶಿಕ್ಷಣ ಸಂಸ್ಥೆಗಳಿಗೆ ಸೇರಬಯಸುವ ಮತ್ತು ಇನ್ನೂ ಹಲವು ಕಾರಣಗಳಿಂದ ಮೊಟಕುಗೊಳಿಸಿದರೆ, ಅವರ ಮೂಲ ದಾಖಲೆ ಪತ್ರವನ್ನು ತಡೆಹಿಡಿಯುವಂತಿಲ್ಲ. ಒಂದು ವೇಳೆ ಇಂತಹ ಬೆಳವಣಿಗೆಗಳು ಕಂಡುಬಂದಲ್ಲಿ ಅಂತಹ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಲು ವಿಟಿಯು ಅಧೀನದಲ್ಲಿರುವ ರಾಜ್ಯದ ಎಲ್ಲ ಖಾಸಗಿ ಕಾಲೇಜುಗಳಿಗೆ ಸುತ್ತೋಲೆಯ ಮೂಲಕ ಆದೇಶಿಸಲಾಗಿತ್ತು.

ಆದರೆ ಹಲವು ಎಂಜಿನಿಯರಿಂಗ್ ಕಾಲೇಜುಗಳು ಇಲಾಖೆಯ ಆದೇಶವನ್ನು ಉಲ್ಲಂಘಿಸಿ ದಾಖಲೆ ಪತ್ರವನ್ನು ಕೇಳಲು ಹೋದ ವಿದ್ಯಾರ್ಥಿಗಳಿಗೆ ಸಂಪೂರ್ಣ 4 ವರ್ಷದ ಶುಲ್ಕವನ್ನು ಪಾವತಿಸಲು ಸೂಚಿಸುತ್ತಿವೆ. ಇಲ್ಲದಿದ್ದರೆ ತಮ್ಮ ಮೂಲ ಪ್ರಮಾಣಪತ್ರವನ್ನು ನೀಡಲು ಅಸಾಧ್ಯ ಎಂದು ಹೇಳುತ್ತಿವೆ.

ಸಂಸ್ಥೆಗಳ ಈ ನಿರ್ಧಾರದಿಂದ ವಿದ್ಯಾರ್ಥಿಗಳು ತಮ್ಮ ಭವಿಷ್ಯದಲ್ಲಿ ಮುಂದಿನ ಶಿಕ್ಷಣ ಮತ್ತು ಉದ್ಯೋಗಕ್ಕೆ ಹೋಗಲು ಅಸಾಧ್ಯವಾಗಿ ಅತಂತ್ರರಾಗಿ-ದ್ದಾರೆ. ಈ ಬಗ್ಗೆ ಹಲವಾರು ದೂರುಗಳು ಜಿಲ್ಲಾಧಿಕಾರಿಯವರ ಮೂಲಕ ಸಂಬಂಧಪಟ್ಟವರಿಗೆ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ ತಾಂತ್ರಿಕ ಶಿಕ್ಷಣ ಇಲಾಖೆ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಇಂತಹ ವಿದ್ಯಾಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಮಹಮ್ಮದ್ ಶಾಕಿರ್ ಅವರು ಆಗ್ರಹಿಸಿದ್ದಾರೆ.

---

ಕರ್ನಾಟಕ ಸರ್ಕಾರ

ಸಂಖ್ಯೆ: ತಶಿಇ/38/ಎಸಿಎಂ(1)/2016-17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು - 560 001.
ದಿನಾಂಕ:23-12-2016.

-:: ಸುತ್ತೋಲೆ ::-

ವಿಷಯ:- ಇಂಜಿನಿಯರಿಂಗ್ ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕಾರಣಾಂತರಗಳಿಂದ ವ್ಯಾಸಂಗ ಮುಂದುವರೆಸಲು ಇಚ್ಛಿಸದಿದ್ದಲ್ಲಿ, ಸದರಿ ವಿದ್ಯಾರ್ಥಿಗಳ ಮೂಲ ಪ್ರಮಾಣ ಪತ್ರಗಳನ್ನು ಹಿಂತಿರುಗಿಸುವ ಬಗ್ಗೆ.

ಉಲ್ಲೇಖ:- 1. ಸರ್ಕಾರದ ಪತ್ರ ಸಂ. ಇಡಿ 49 ಟಿಇಸಿ 2016(ಭಾ-2), ದಿ:20-12-2016.
2. ಸರ್ಕಾರದ ಸುತ್ತೋಲೆ ಸಂ. ಇಡಿ 156 ಟಿಇಸಿ 2015, ದಿ:14-10-2015.

-000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸುತ್ತೋಲೆಯಲ್ಲಿ ಇಂಜಿನಿಯರಿಂಗ್ ಪದವಿ ವಿದ್ಯಾರ್ಥಿಗಳು ಕಾರಣಾಂತರಗಳಿಂದ ವ್ಯಾಸಂಗ ಮುಂದುವರೆಸಲು ಇಚ್ಛಿಸದಿದ್ದಲ್ಲಿ, ಅಂತಹ ವಿದ್ಯಾರ್ಥಿಗಳ ಮೂಲ ಪ್ರಮಾಣ ಪತ್ರಗಳನ್ನು ಹಿಂತಿರುಗಿಸುವಂತೆ ಸರ್ಕಾರವು ಉಲ್ಲೇಖ(2)ರಲ್ಲಿ ಸುತ್ತೋಲೆಯನ್ನು ಹೊರಡಿಸಿದೆ.

ವಿದ್ಯಾರ್ಥಿಗಳ ಕೋರಿಕೆ ಸಲ್ಲಿಸಿದರೂ ಅವರ ಮೂಲ ಪ್ರಮಾಣ ಪತ್ರಗಳನ್ನು ಹಿಂತಿರುಗಿಸಲು ವಿಳಂಬ ಧೋರಣೆ ಅನುಸರಿಸುತ್ತಿರುವುದು ಹಾಗೂ ಕೋರ್ಸಿನ ಉಳಿದ ಕಾಲಾವಧಿಗೆ ಶುಲ್ಕವನ್ನು ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಪ್ರಯುಕ್ತ, ರಾಜ್ಯದ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕಾರಣಾಂತರಗಳಿಂದ ವ್ಯಾಸಂಗ ಮುಂದುವರೆಸಲು ಇಚ್ಛಿಸದಿದ್ದಲ್ಲಿ, ಸದರಿ ವಿದ್ಯಾರ್ಥಿಗಳ ಮೂಲ ಪ್ರಮಾಣ ಪತ್ರಗಳನ್ನು ಶುಲ್ಕ ಪಾವತಿಸಲು ಒತ್ತಾಯಿಸದೇ ಹಾಗೂ ವಿಳಂಬ ಧೋರಣೆ ಮಾಡದೇ ಹಿಂತಿರುಗಿಸಲು ಸೂಚಿಸಲಾಗಿದೆ. ಹಾಗೂ ಉಲ್ಲೇಖ(2)ರ ಸರ್ಕಾರದ ಸುತ್ತೋಲೆಯಲ್ಲಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಮೂಲಕ ಸೂಚಿಸಲಾಗಿದೆ.